**Circular No – 066/2024**

Date: 12.11.2024

To
All Members of The Association

**MENSTRUAL LEAVES TO WORKING WOMEN DURING THEIR MENSTRUAL CYCLE**

1. The Government of Karnataka had appointed a committee consisting of experts, representatives of the employers and employees to examine the above proposal and to submit their report.
2. The committee after detailed deliberations has suggested that the women employed in factories, industries, garments, multi-national companies, information technology and other different industries, may be granted six days leave with pay per annum to be availed by the women employee during the menstrual cycle.
3. The Commissioner of Labour Government of Karnataka, Karmika Bhavana, Bannergatta Road, Bengaluru 500029 has sought the suggestion / objection / opinion of the Employers, Trade unions, Women Associations, in respect of granting menstrual leave to working women during their menstrual cycle.
4. Copy of Circular No. P & S / Misc-02/CR-39/2022-23 dated 30.10.2024 is available on the portal of the Association. The members may download the circular and send their views directly to the Commissioner of Labour on the above subject.

**For KARNATAKA EMPLOYERS' ASSOCIATION**
**Sd/**
**[B C Prabhakar]**
**President**

CR- 38.

**ಆಯುಕ್ತರು**
ಕಾರ್ಮಿಕ ಆಯುಕ್ತರ ಕಛೇರಿ

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

''ಕಾರ್ಮಿಕ ಭವನ'', ಐಟಿಐ ಕಾಲೇಜ್ ಕಾಂಪೌಂಡ್
ಬನ್ನೇರುಘಟ್ಟರಸ್ತೆ, ಬೆಂಗಳೂರು - 560 029
ಕಛೇರಿ: 080 2975 3078
ಇಮೇಲ್ : labour.commissioner42@gmail.com

ಸಂಖ್ಯೆ: ಪಿ&ಎಸ್/ಇತರೆ-02/ಸಿಆರ್-39/2022-23

ದಿನಾಂಕ:30-10-2024

ಗೆ,

1. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಕರ್ನಾಟಕ ಕಟ್ಟಡ ಮತ್ತ ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು.

2. ನಿರ್ದೇಶಕರು ಕಾರ್ಖಾನೆಗಳು ಬಾಯ್ಲರ್‌ಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಬೆಂಗಳೂರು.

3. ಕಲ್ಯಾಣ ಆಯುಕ್ತರು, ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ, ಯಶವಂತಪುರ, ಕಾರ್ಮಿಕ ಕಲ್ಯಾಣ ಭವನ, ಬೆಂಗಳೂರು.

4. ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಜಂಟಿ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಬೆಂಗಳೂರು.

ಮಾನ್ಯರೇ,

**ವಿಷಯ:** ವಿವಿಧ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುವ ಮಹಿಳಾ ಕಾರ್ಮಿಕರಿಗೆ ಅವರ ಋತುಚಕ್ರದ ಸಮಯದಲ್ಲಿ ಒಂದು ದಿನದ ವೇತನ ಸಹಿತ ರಜೆ ಮಂಜೂರು ಮಾಡುವ ಕುರಿತು ವಿವಿಧ ಸಂಘಟನೆಗಳು, ಮಹಿಳಾ ಸಂಘಟನೆಗಳು, ಕಾರ್ಮಿಕ ಪ್ರತಿನಿಧಿಗಳು, ಆಡಳಿತ ವರ್ಗದವರು ಹಾಗೂ ಸಾರ್ವಜನಿಕರು ಅಭಿಪ್ರಾಯ ನೀಡುವ ಕುರಿತು.

**ಉಲ್ಲೇಖ:**
1. ಸರ್ಕಾರದ ಪತ್ರ ಸಂಖ್ಯೆ: ಕಾಇ 466 ಎಲ್‌ಇಟಿ 2023, ದಿನಾಂಕ: 03-10-2024.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 466 ಎಲ್‌ಇಟಿ 2023, ದಿನಾಂಕ;12-01-2024
3. ಸರ್ಕಾರದ ಪತ್ರ ಸಂಖ್ಯೆ: ಕಾಇ 466 ಎಲ್‌ಇಟಿ 2023, ದಿನಾಂಕ: 02-11-2023.

ADFB
F&B
199
LGC

Directorate of Factories, Boilers, Industrial Safety & Health
No. 8824.
Date 5/11/24

===

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿನ ಕಾರ್ಖಾನೆಗಳು, ಕೈಗಾರಿಕೆಗಳು, ಗಾರ್ಮೆಂಟ್ಸ್, ಬಹುರಾಷ್ಟ್ರೀಯ ಕಂಪೆನಿಗಳು, ಮಾಹಿತಿ ತಂತ್ರಜ್ಞಾನ ಕ್ಷೇತ್ರ ಸೇರಿದಂತೆ ವಿವಿಧ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಕಾರ್ಮಿಕರಿಗೆ ಅವರ ಕಾರ್ಯದಕ್ಷತೆ ಮತ್ತು ಕಾರ್ಯಕ್ಷಮತೆ ಹೆಚ್ಚಿಸಿ ಅವರ ಮನೋಸ್ಥೈರ್ಯವನ್ನು ಹೆಚ್ಚಿಸಲು ಮಾಸಿಕ ಋತುಚಕ್ರದ ಮೊದಲ ದಿನ ವೇತನ ಸಹಿತ ರಜೆಯನ್ನು ಮಂಜೂರು ಮಾಡಲು ಅಧಿಸೂಚನೆ ಹೊರಡಿಸುವ ಸಂಬಂಧ ಚರ್ಚಿಸಿ ವರದಿ ಸಲ್ಲಿಸಲು ಡಾ॥ ಸಪ್ನ ಮೋಹನ್, ಹೆಚ್.ಓ.ಡಿ ಹಾಗೂ ಪ್ರೊಫೆಸರ್, ಸ್ಕೂಲ್ ಆಫ್ ಲಾ, ಕ್ರೈಸ್ಟ್ ಯೂನಿವರ್ಸಿಟಿ ರವರ ಅಧ್ಯಕ್ಷತೆಯಲ್ಲಿ ಕಾರ್ಮಿಕ ಇಲಾಖೆಯ ವಿವಿಧ ಸ್ತರದ ಅಧಿಕಾರಿಗಳು ಹಾಗೂ ವೈದ್ಯರುಗಳು, ಉದ್ದಿಮೆಗಳ

ಮಾಲೀಕರು ಮತ್ತು ಕಾರ್ಮಿಕ ವರ್ಗಗಳ ಪ್ರತಿನಿಧಿಗಳು, ಪ್ರಾಧ್ಯಾಪಕರು, ಸಮಾಜ ಸೇವಕರು ಮೊದಲಾದ ಸದಸ್ಯರುಗಳನ್ನೊಳಗೊಂಡ ತಜ್ಞರ ಸಮಿತಿಯನ್ನು ರಚಿಸಲಾಗಿತ್ತು.

ಸದರಿ ಸಮಿತಿಯು ಹಲವಾರು ಸಭೆಗಳನ್ನು ನಡೆಸಿ ವಿವಿಧ ಹಂತಗಳಲ್ಲಿ ಚರ್ಚಿಸಿ ಕಾರ್ಖಾನೆಗಳು, ಗಣಿಗಳು, ಪ್ಲಾಂಟೇಷನ್, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಮೊದಲಾದವುಗಳಲ್ಲಿ ದುಡಿಯುವ ಮಹಿಳೆಯರಿಗೆ ಅವರ ಋತುಚಕ್ರದ ಕಾಲಕ್ಕೆ ಬಳಸಿಕೊಳ್ಳಲು ವಾರ್ಷಿಕ 6 ಋತುಸ್ರಾವ ರಜೆಗಳನ್ನು ಶಿಫಾರಸ್ಸು ಮಾಡಿದ್ದು, ವರದಿಯು ಸರ್ಕಾರಕ್ಕೆ ಸಲ್ಲಿಕೆಯಾಗಿರುತ್ತದೆ.

ಈ ಹಿನ್ನಲೆಯಲ್ಲಿ, ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಖಾನೆಗಳು, ಕೈಗಾರಿಕೆಗಳು, ಗಾರ್ಮೆಂಟ್ಸ್, ಬಹುರಾಷ್ಟ್ರೀಯ ಕಂಪೆನಿಗಳು, ಮಾಹಿತಿ ತಂತ್ರಜ್ಞಾನ ಕ್ಷೇತ್ರ ಸೇರಿದಂತೆ ವಿವಿಧ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುವ ಕಂಪನಿಗಳಲ್ಲಿ ಮಹಿಳಾ ಕಾರ್ಮಿಕರಿಗೆ ಅವರ ಋತುಚಕ್ರದ ಸಮಯದಲ್ಲಿ ವೇತನ ಸಹಿತ ಋತುಸ್ರಾವ ರಜೆ ಮಂಜೂರು ಮಾಡುವ ಕುರಿತು ವಿವಿಧ ಸಂಘಟನೆಗಳು, ಕಾರ್ಮಿಕ ಪ್ರತಿನಿಧಿಗಳು, ಆಡಳಿತ ವರ್ಗದವರು ಹಾಗೂ ಸಾರ್ವಜನಿಕರ ಅಭಿಪ್ರಾಯವನ್ನು ಪಡೆದು ಸಲ್ಲಿಸಲು ಸೂಚಿಸಿರುತ್ತಾರೆ.

ಆದಕಾರಣ ವಿವಿಧ ಸಂಘಟನೆಗಳು, ಮಹಿಳಾ ಸಂಘಟನೆಗಳು, ಕಾರ್ಮಿಕ ಸಂಘಗಳು / ಪ್ರತಿನಿಧಿಗಳು, ಕಾರ್ಮಿಕರು ಹಾಗೂ ಸಾರ್ವಜನಿಕರು ಮಹಿಳಾ ಕಾರ್ಮಿಕರಿಗೆ ಅವರ ಋತುಚಕ್ರದ ಸಮಯದಲ್ಲಿ ಬಳಸಿಕೊಳ್ಳಲು ವಾರ್ಷಿಕ 6 ದಿನಗಳ ವೇತನ ಸಹಿತ ಋತುಸ್ರಾವ ರಜೆ ಮಂಜೂರು ಮಾಡುವ ನೀತಿಯ ಕುರಿತು ಇದರೊಂದಿಗೆ ಲಗತ್ತಿಸಿರುವ ಪ್ರಕಟಣೆಯನ್ನು ತಮ್ಮ ವೆಬ್ ಸೈಟ್ ನಲ್ಲಿ ಪ್ರಕಟಿಸಿ, ಅಭಿಪ್ರಾಯವನ್ನು ಇದರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ 30 ದಿನಗಳೊಳಗಾಗಿ ಇ-ಮೇಲ್ dlcbangalore@gmail.com ಮೂಲಕ ಅಥವಾ ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029 ಇವರಿಗೆ ಲಿಖಿತವಾಗಿ ಸಲ್ಲಿಸಲು ಮನವಿ ಮಾಡಲು ಕೋರಿದೆ.

ತಮ್ಮ ವಿಶ್ವಾಸಿ

ಆಯುಕ್ತರು
ಕಾರ್ಮಿಕ ಇಲಾಖೆ

**ಆಯುಕ್ತರು**
ಕಾರ್ಮಿಕ ಆಯುಕ್ತರ ಕಛೇರಿ

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

''ಕಾರ್ಮಿಕ ಭವನ'', ಐಟಿಐ ಕಾಲೇಜ್ ಕಾಂಪೌಂಡ್
ಬನ್ನೇರುಘಟ್ಟ ರಸ್ತೆ, ಬೆಂಗಳೂರು – 560 029
ಕಛೇರಿ: 080 2975 3078
ಇಮೇಲ್ : labour.commissioner42@gmail.com

ಸಂಖ್ಯೆ: ಪಿ&ಎಸ್/ಇತರೆ-02/ಸಿಆರ್-39/202-23 ದಿನಾಂಕ:30-10-2024

## ಪ್ರಕಟಣೆ

**ವಿಷಯ:** ವಿವಿಧ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುವ ಮಹಿಳಾ ಕಾರ್ಮಿಕರಿಗೆ ಅವರ ಋತುಚಕ್ರದ ಸಮಯದಲ್ಲಿ ಒಂದು ದಿನದ ವೇತನ ಸಹಿತ ರಜೆ ಮಂಜೂರು ಮಾಡುವ ಕುರಿತು ವಿವಿಧ ಸಂಘಟನೆಗಳು, ಮಹಿಳಾ ಸಂಘಟನೆಗಳು, ಕಾರ್ಮಿಕ ಪ್ರತಿನಿಧಿಗಳು, ಆಡಳಿತ ವರ್ಗದವರು ಹಾಗೂ ಸಾರ್ವಜನಿಕರು ಅಭಿಪ್ರಾಯ ನೀಡುವ ಕುರಿತು.

= = =

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿನ ಕಾರ್ಖಾನೆಗಳು, ಕೈಗಾರಿಕೆಗಳು, ಗಾರ್ಮೆಂಟ್ಸ್, ಬಹುರಾಷ್ಟ್ರೀಯ ಕಂಪೆನಿಗಳು, ಮಾಹಿತಿ ತಂತ್ರಜ್ಞಾನ ಕ್ಷೇತ್ರ ಸೇರಿದಂತೆ ವಿವಿಧ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಕಾರ್ಮಿಕರಿಗೆ ಅವರ ಕಾರ್ಯದಕ್ಷತೆ ಮತ್ತು ಕಾರ್ಯಕ್ಷಮತೆ ಹೆಚ್ಚಿಸಿ ಅವರ ಮನೋಸ್ಥೈರ್ಯವನ್ನು ಹೆಚ್ಚಿಸಲು ಮಾಸಿಕ ಋತುಚಕ್ರದ ಮೊದಲ ದಿನ ವೇತನ ಸಹಿತ ರಜೆಯನ್ನು ಮಂಜೂರು ಮಾಡಲು ಅಧಿಸೂಚನೆ ಹೊರಡಿಸುವ ಸಂಬಂಧ ಚರ್ಚಿಸಿ ವರದಿ ಸಲ್ಲಿಸಲು ಡಾ॥ ಸಪ್ನ ಮೋಹನ್, ಹೆಚ್.ಓ.ಡಿ ಹಾಗೂ ಪ್ರೊಫೆಸರ್, ಸ್ಕೂಲ್ ಆಫ್ ಲಾ, ಕ್ರೈಸ್ಟ್ ಯೂನಿವರ್ಸಿಟಿ ರವರ ಅಧ್ಯಕ್ಷತೆಯಲ್ಲಿ ಕಾರ್ಮಿಕ ಇಲಾಖೆಯ ವಿವಿಧ ಸ್ತರದ ಅಧಿಕಾರಿಗಳು ಹಾಗೂ ವೈದ್ಯರುಗಳು, ಉದ್ದಿಮೆಗಳ ಮಾಲೀಕರು ಮತ್ತು ಕಾರ್ಮಿಕ ವರ್ಗಗಳ ಪ್ರತಿನಿಧಿಗಳು, ಪ್ರಾಧ್ಯಾಪಕರು, ಸಮಾಜ ಸೇವಕರು ಮೊದಲಾದ ಸದಸ್ಯರುಗಳನ್ನೊಳಗೊಂಡ ತಜ್ಞರ ಸಮಿತಿಯನ್ನು ರಚಿಸಲಾಗಿತ್ತು.

ಸದರಿ ಸಮಿತಿಯು ಹಲವಾರು ಸಭೆಗಳನ್ನು ನಡೆಸಿ ವಿವಿಧ ಹಂತಗಳಲ್ಲಿ ಚರ್ಚಿಸಿ ಕಾರ್ಖಾನೆಗಳು, ಗಣಿಗಳು, ಪ್ಲಾಂಟೇಷನ್, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಮೊದಲಾದವುಗಳಲ್ಲಿ ದುಡಿಯುವ ಮಹಿಳೆಯರಿಗೆ ಅವರ ಋತುಚಕ್ರದ ಕಾಲಕ್ಕೆ ಬಳಸಿಕೊಳ್ಳಲು ವಾರ್ಷಿಕ 6 ಋತುಸ್ರಾವ ರಜೆಗಳನ್ನು ಶಿಫಾರಸ್ಸು ಮಾಡಿದ್ದು, ವರದಿಯು ಸರ್ಕಾರಕ್ಕೆ ಸಲ್ಲಿಕೆಯಾಗಿರುತ್ತದೆ.

ಈ ಹಿನ್ನಲೆಯಲ್ಲಿ, ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಖಾನೆಗಳು, ಕೈಗಾರಿಕೆಗಳು, ಗಾರ್ಮೆಂಟ್ಸ್, ಬಹುರಾಷ್ಟ್ರೀಯ ಕಂಪೆನಿಗಳು, ಮಾಹಿತಿ ತಂತ್ರಜ್ಞಾನ ಕ್ಷೇತ್ರ ಸೇರಿದಂತೆ ವಿವಿಧ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುವ ಕಂಪನಿಗಳಲ್ಲಿ ಮಹಿಳಾ ಕಾರ್ಮಿಕರಿಗೆ ಅವರ ಋತುಚಕ್ರದ ಸಮಯದಲ್ಲಿ ವೇತನ ಸಹಿತ ಋತುಸ್ರಾವ ರಜೆ ಮಂಜೂರು ಮಾಡುವ ಕುರಿತು ವಿವಿಧ ಸಂಘಟನೆಗಳು, ಕಾರ್ಮಿಕ ಪ್ರತಿನಿಧಿಗಳು, ಆಡಳಿತ ವರ್ಗದವರು ಹಾಗೂ ಸಾರ್ವಜನಿಕರ ಅಭಿಪ್ರಾಯವನ್ನು ಪಡೆದು ಸಲ್ಲಿಸಲು ಸೂಚಿಸಿರುತ್ತದೆ.

ಆದಕಾರಣ ಎಲ್ಲಾ ಕಾರ್ಖಾನೆಗಳು, ಕೈಗಾರಿಕೆಗಳು, ಕಂಪನಿಗಳ ಮಾಲೀಕರು, ವಿವಿಧ ಸಂಘಟನೆಗಳು, ಮಹಿಳಾ ಸಂಘಟನೆಗಳು, ಕಾರ್ಮಿಕ ಸಂಘಗಳು / ಪ್ರತಿನಿಧಿಗಳು, ಕಾರ್ಮಿಕರು ಹಾಗೂ ಸಾರ್ವಜನಿಕರು ಮಹಿಳಾ ಕಾರ್ಮಿಕರಿಗೆ ಅವರ ಋತುಚಕ್ರದ ಸಮಯದಲ್ಲಿ ಬಳಸಿಕೊಳ್ಳಲು ವಾರ್ಷಿಕ 6 ದಿನಗಳ ವೇತನ ಸಹಿತ ಋತುಸ್ರಾವ ರಜೆ ಮಂಜೂರು ಮಾಡುವ ನೀತಿಯ ಕುರಿತು ತಮ್ಮ ಅಭಿಪ್ರಾಯವನ್ನು ಇದರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ 30 ದಿನಗಳೊಳಗಾಗಿ ಇ-ಮೇಲ್ dlcbangalore@gmail.com ಮೂಲಕ ಅಥವಾ ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029 ಇವರಿಗೆ ಲಿಖಿತವಾಗಿ ಕಳುಹಿಸಿಕೊಡಲು ಮನವಿ ಮಾಡಲಾಗಿದೆ.

Gopal K

**ಆಯುಕ್ತರು**
**ಕಾರ್ಮಿಕ ಇಲಾಖೆ**

**ಇವರಿಗೆ,**

1. ಕಾರ್ಖಾನೆಗಳು, ಕೈಗಾರಿಕೆಗಳು ಮತ್ತು ಇತರೆ ಉದ್ದಿಮೆಗಳ ಮಾಲೀಕರು.
2. ವಿವಿಧ ಸಂಘಟನೆಗಳು / ಮಹಿಳಾ ಸಂಘಟನೆಗಳು.
3. ಕಾರ್ಮಿಕ ಸಂಘಗಳು / ಪ್ರತಿನಿಧಿಗಳು.
4. ಕಾರ್ಮಿಕರು.
5. ಎಲ್ಲಾ ಸಾರ್ವಜನಿಕರ ಗಮನಕ್ಕಾಗಿ.

# ನಮೂನೆ

## ದುಡಿಯುವ ಮಹಿಳೆಯರಿಗೆ ಅವರ ಋತುಚಕ್ರದ ಸಂದರ್ಭದಲ್ಲಿ ಋತುಸ್ರಾವ ರಜೆ ನೀಡುವ ಕುರಿತು ಅಭಿಪ್ರಾಯ

| | | |
|---|---|---|
| 1. | ಉದ್ಯೋಗದಾತರು / ಕಾರ್ಮಿಕ ಸಂಘಗಳು / ಮಹಿಳಾ ಸಂಘಟನೆಗಳು / ಉದ್ಯೋಗಿಗಳು / ಸಾರ್ವಜನಿಕರ ಹೆಸರು ಮತ್ತು ಹುದ್ದೆ | |
| 2. | ಸಂಸ್ಥೆ ಅಥವಾ ಸಂಘದ ಹೆಸರು ಮತ್ತು ವಿಳಾಸ | |
| 3. | ಕಾರ್ಖಾನೆಗಳು, ಗಣಿಗಳು, ಪ್ಲಾಂಟೇಷನ್, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಮೊದಲಾದವುಗಳಲ್ಲಿ ದುಡಿಯುವ ಮಹಿಳೆಯರಿಗೆ ಅವರ ಋತುಚಕ್ರದ ಸಮಯದಲ್ಲಿ ವಾರ್ಷಿಕ 06 ದಿನಗಳ ವೇತನ ಸಹಿತ ರಜೆ ನೀಡುವುದರ ಕುರಿತು ತಮ್ಮ ಸಲಹೆ / ಸೂಚನೆ / ಆಕ್ಷೇಪಣೆ / ಅಭಿಪ್ರಾಯ ತಿಳಿಸುವುದು. | |

**ದಿನಾಂಕ:**

**ಸಹಿ:**

# Format

## Opinion on granting Menstrual Leaves to working women during their menstrual cycle

| | | |
|---|---|---|
| 1. | Name and Designation of the Employer / Labour Unions / Women's Organizations / Employees / Public | |
| 2. | Name and address of the organization or association | |
| 3. | Please provide your opinion on granting of 06 Paid Menstrual Leaves to working women during their menstrual cycle, working in Factories, Mines, Plantations, Shops and Commercial Establishments and others. | |

Date:

Signature: